## 2003 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 6

## ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧ್ಯಾದೇಶ, 2003

### ಪ್ರಕರಣಗಳ ಪಟ್ಟಿ

ಪ್ರಕರಣಗಳು


1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು
3. ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ
4. ದಂಡ
5. ನ್ಯಾಯಾಲಯದಲ್ಲಿ ಹಣವನ್ನು ಠೇವಣಿ ಇಡುವುದು ಮತ್ತು ಅರ್ಜಿಯನ್ನು ಸಲ್ಲಿಸುವುದು ಹಾಗೂ ಅದರ ಕಾರ್ಯ ವಿಧಾನ
6. ಸ್ವತ್ತಿನ ಸ್ವಾಧೀನತೆಯನ್ನು ಪುನಃ ಒಪ್ಪಿಸುವುದು
7. ಸ್ವಇಚ್ಛೆಯಿಂದ ಬಹಿರಂಗಪಡಿಸುವುದು
8. ಬಡ್ಡಿಯ ಹೊಂದಾಣಿಕೆ
9. ಆತ್ಮಹತ್ಯೆಗೆ ದುಷ್ಪ್ರೇರಣೆ
10. ನ್ಯಾಯಾಲಯ ಶುಲ್ಕ
11. ಅಧ್ಯಾದೇಶವು ಇತರೆ ಕಾನೂನುಗಳನ್ನು ನ್ಯೂನತೆಗೊಳಿಸದಿರುವುದು
12. ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ ಉಪಬಂಧಗಳ ಅನ್ವಯ
13. ಸಾಲದ ಮರು ಸಂದಾಯದ ಮುಂದೂಡಿಕೆ

## 2003 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 6

## ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧ್ಯಾದೇಶ, 2003

*(ಭಾರತ ಗಣರಾಜ್ಯದ ಐವತ್ನಾಲ್ಕನೆಯ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರಿಂದ ಪ್ರಖ್ಯಾಪಿತವಾಗಿ 2003 ರ ಸೆಪ್ಟೆಂಬರ್ 5 ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)*

ಯಾವೊಬ್ಬ ವ್ಯಕ್ತಿಯು ಮಿತಿಮೀರಿದ ಬಡ್ಡಿ ವಿಧಿಸುವುದನ್ನು ನಿಷೇಧಿಸಲು ಮತ್ತು ಅದಕ್ಕೆ ಪ್ರಾಸಂಗಿಕವಾದ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಲು ಒಂದು ಅಧ್ಯಾದೇಶ.

ಸಾರ್ವಜನಿಕರನೇಕರು ಅನುಭವಿಸುತ್ತಿರುವ ತೊಂದರೆಗಳನ್ನು ನಿವಾರಿಸುವುದಕ್ಕಾಗಿ ಮತ್ತು ಮಿತಿಮೀರಿದ ಬಡ್ಡಿಯನ್ನು ವಿಧಿಸುವ ಯಾವೊಬ್ಬ ವ್ಯಕ್ತಿಯ ಸಾಲದ ಸುಳಿಯಲ್ಲಿ ಅವರು ಸಿಕ್ಕಿಕೊಳ್ಳುವುದನ್ನು ತಪ್ಪಿಸುವುದಕ್ಕಾಗಿ, ಅಂಥ ಮಿತಿಮೀರಿದ ಬಡ್ಡಿವಿಧಿಸಿ ಹಣ ಸಾಲ ನೀಡುವುದನ್ನು ನಿಷೇಧಿಸಲು ಮತ್ತು ಅದಕ್ಕೆ ಕಠಿಣ ಶಿಕ್ಷೆವಿಧಿಸಲು ಉಪಬಂಧ ಕಲ್ಪಿಸುವುದು ಅವಶ್ಯವೆಂದು ಪರಿಗಣಿಸಲಾಗಿರುವುದರಿಂದ;

ರಾಜ್ಯ ವಿಧಾನ ಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ ಮತ್ತು ಇದರಲ್ಲಿ ಇನ್ನು ಮುಂದೆ ಕಂಡುಬಂದಿರುವ ಉದ್ದೇಶಗಳಿಗಾಗಿ ಶೀಘ್ರ ಕ್ರಮಕೈಗೊಳ್ಳುವುದನ್ನು ಅವಶ್ಯಕಗೊಳಿಸುವಂಥ ಸನ್ನಿವೇಶಗಳು ಉಂಟಾಗಿವೆ ಎಂದು ರಾಜ್ಯಪಾಲರಿಗೆ ಮನದಟ್ಟಾಗಿರುವುದರಿಂದ;

ಈಗ, ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ರಾಜ್ಯಪಾಲರು ಈ ಮುಂದಿನ ಅಧ್ಯಾದೇಶವನ್ನು ಪ್ರಖ್ಯಾಪಿಸಿದ್ದಾರೆ, ಎಂದರೆ:-

1. **ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ:-** (1) ಈ ಅಧ್ಯಾದೇಶವನ್ನು ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧ್ಯಾದೇಶ, 2003 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗುತ್ತದೆ.

(3) ಇದು ಕೂಡಲೇ ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.-** ಈ ಅಧ್ಯಾದೇಶದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,

ಕರ್ನಾಟಕ ರಾಜ್ಯ ಪತ್ರದ ಭಾಗIVಎ ವಿಶೇಷ ಪತ್ರಿಕೆ ಸಂಖ್ಯೆ: 1059 ದಿನಾಂಕ: 5.9.2003 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 53 ಶಾಸನ 2003

(ಎ) "ಸಾಲಗಾರ" ಎಂದರೆ, ಮಿತಿಮೀರಿದ ಬಡ್ಡಿಯ ಮೇಲೆ ಸಾಲವನ್ನು ತೆಗೆದುಕೊಂಡ ಒಬ್ಬ ವ್ಯಕ್ತಿ.

(ಬಿ) "ಮಿತಿಮೀರಿದ ಬಡ್ಡಿ" ಎಂದರೆ ಲೆಕ್ಕಹಾಕಿದಾಗ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ ಅಡಿಯಲ್ಲಿ ಸರ್ಕಾರವು ನಿಗದಿ ಮಾಡಿದ್ದಕ್ಕಿಂತ ಹೆಚ್ಚಿನ ದರದ ಬಡ್ಡಿ ಆಗುವಂತೆ ಗಂಟೆಗಳ ಆಧಾರ, ದಿನದ ಆಧಾರ, ಕಂತುಗಳ ಆಧಾರ, ಮಾಸಿಕ ಆಧಾರದ ಮೇಲೆ ಅಥವಾ ಯಾವುದೇ ಇತರ ರೀತಿಯಲ್ಲಿ ಬಡ್ಡಿ ವಿಧಿಸುವುದು ಮತ್ತು ಅದು ಅವುಗಳನ್ನು ಒಳಗೊಳ್ಳುತ್ತದೆ.

(ಸಿ) "ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961" ಎಂದರೆ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961 (1961ರ ಕರ್ನಾಟಕ ಅಧಿನಿಯಮ 12).

(ಡಿ) "ಸಾಲ" ಎಂದರೆ ಮಿತಿಮೀರಿದ ಬಡ್ಡಿಯ ಮೇಲೆ ಸಾಲಗಾರನಿಗೆ ಮುಂಗಡವಾಗಿ ನೀಡಿದ ಹಣ.

(2) ಈ ಅಧ್ಯಾದೇಶದಲ್ಲಿ ಬಳಸಿದ ಆದರೆ ಪರಿಭಾಷಿಸಿರದ ಪದಗಳು ಮತ್ತು ಪದಾವಳಿಗಳು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961 ರಲ್ಲಿ ಅವುಗಳಿಗೆ ಕೊಡಲಾದ ಅರ್ಥವನ್ನೇ ಹೊಂದಿರತಕ್ಕದ್ದು.

**3. ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ.-** ಯಾವೊಬ್ಬ ವ್ಯಕ್ತಿಯೂ ತಾನು ನೀಡಿದ ಯಾವುದೇ ಸಾಲದ ಮೇಲೆ ಮಿತಿಮೀರಿದ ಬಡ್ಡಿಯನ್ನು ವಿಧಿಸತಕ್ಕದ್ದಲ್ಲ.

**4. ದಂಡ.-** ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರಲ್ಲಿ ಏನೇ ಒಳಗೊಂಡಿದ್ದರೂ, 3ನೇ ಪ್ರಕರಣದ ಉಪಬಂಧವನ್ನು ಉಲ್ಲಂಘಿಸುವ ಅಥವಾ ಯಾವುದೇ ಸಾಲದ ವಸೂಲಿಗಾಗಿ ಯಾವೊಬ್ಬ ಸಾಲಗಾರನನ್ನು ಪೀಡಿಸುವ ಅಥವಾ ಪೀಡಿಸುವುದಕ್ಕಾಗಿ ದುಷ್ಪ್ರೇರಿಸುವ ಯಾವೊಬ್ಬ ವ್ಯಕ್ತಿಯು, ಮೂರು ವರ್ಷಗಳವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಮತ್ತು ಮೂವತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಸಹ ದಂಡಿತನಾಗತಕ್ಕದ್ದು.

**5. ನ್ಯಾಯಾಲಯದಲ್ಲಿ ಹಣವನ್ನು ಠೇವಣಿ ಇಡುವುದು ಮತ್ತು ಅರ್ಜಿಯನ್ನು ಸಲ್ಲಿಸುವುದು ಹಾಗೂ ಅದರ ಕಾರ್ಯ ವಿಧಾನ.-** (1) ಸಾಲಗಾರನು ಯಾವೊಬ್ಬ

ವ್ಯಕ್ತಿಯಿಂದ ತಾನು ಸ್ವೀಕರಿಸಿದ ಸಾಲದ ಸಂಬಂಧದಲ್ಲಿ ಬಾಕಿ ಇರುವ ಹಣವನ್ನು, ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ ಅಡಿಯಲ್ಲಿ ಸರ್ಕಾರವು ನಿಗದಿ ಮಾಡಿದ ದರದಲ್ಲಿ ಬಡ್ಡಿಯೊಡನೆ ಅಧಿಕಾರ ವ್ಯಾಪ್ತಿಯನ್ನುಳ್ಳ ನ್ಯಾಯಾಲಯದಲ್ಲಿ ಹಣವನ್ನು, ಪೂರ್ಣವಾಗಿ ಅಥವಾ ಸಂದರ್ಭಾನುಸಾರ ಭಾಗಶಃ ಸಾಲದ ತೀರಿಕೆಗಾಗಿ ಸಾಲ ಮತ್ತು ಬಡ್ಡಿ ಹಣವನ್ನು ಠೇವಣಿ ಇಡಲಾಗಿದೆ ಎಂಬುದನ್ನು ದಾಖಲಿಸುವ ಅರ್ಜಿ ಸಹಿತ ಠೇವಣಿ ಇಡಬಹುದು.

(2) ನ್ಯಾಯಾಲಯವು (1)ನೇ ಉಪಪ್ರಕರಣದ ಅಡಿಯಲ್ಲಿನ ಅರ್ಜಿಯನ್ನು ಸ್ವೀಕರಿಸಿದ ಮೇಲೆ, ಅರ್ಜಿಯಲ್ಲಿ ನಮೂದಿಸಿದ ವ್ಯಕ್ತಿಗೆ, ನ್ಯಾಯಾಲಯವು ನೀಡಬಹುದಾದಂತೆ, ಹದಿನೈದು ದಿನಗಳ ಅವಧಿಯ ಒಳಗೆ ತನ್ನ ಉತ್ತರಗಳನ್ನು ನೀಡುವಂತೆ ನಿರ್ದೇಶಿಸಿ ಅರ್ಜಿಯ ಒಂದು ಪ್ರತಿಯನ್ನು ಕಳುಹಿಸತಕ್ಕದ್ದು. ನ್ಯಾಯಾಲಯವು ವಿಚಾರಣೆಯ ತರುವಾಯ ಮತ್ತು ಉಭಯ ಪಕ್ಷಗಳ ಹೇಳಿಕೆಗಳನ್ನು ಪರಿಗಣಿಸಿದ ತರುವಾಯ, ಸಾಲ ಮತ್ತು ಅದರ ಬಡ್ಡಿಯು ಪೂರ್ಣವಾಗಿ ಅಥವಾ ಸಂದರ್ಭಾನುಸಾರ ಭಾಗಶಃ ತೀರಿಕೆಯಾಗಿದೆ ಎಂದು ದಾಖಲು ಮಾಡಿ ಆದೇಶಗಳನ್ನು ಹೊರಡಿಸಬಹುದು.

**6. ಸ್ವತ್ತಿನ ಸ್ವಾಧೀನತೆಯನ್ನು ಪುನಃ ಒಪ್ಪಿಸುವುದು.-** ನ್ಯಾಯಾಲಯವು, ಸಾಲಗಾರನು ಅರ್ಜಿಯನ್ನು ಸಲ್ಲಿಸಿದ ಮೇಲೆ, ನೀಡಿದ ಸಾಲದ ಅಥವಾ ಅದರ ಬಡ್ಡಿಯ ಮರುಪಾವತಿಗಾಗಿ ಯಾವೊಬ್ಬ ವ್ಯಕ್ತಿಯು ಬಲವಂತವಾಗಿ ತೆಗೆದುಕೊಂಡ ಚರ ಅಥವಾ ಸ್ಥಿರ ಸ್ವತ್ತು, ಯಾವುದಾದರು ಇದ್ದರೆ ಅದರ ಸ್ವಾಧೀನತೆಯನ್ನು ಪುನಃ ಒಪ್ಪಿಸಬೇಕೆಂದು ಆದೇಶವನ್ನು ಹೊರಡಿಸಬಹುದು.

**7. ಸ್ವಇಚ್ಛೆಯಿಂದ ಬಹಿರಂಗ ಪಡಿಸುವುದು.-** ಮಿತಿಮೀರಿದ ಬಡ್ಡಿಯನ್ನು ವಿಧಿಸುತ್ತಿರುವ ಯಾವೊಬ್ಬ ವ್ಯಕ್ತಿಯು, ಈ ಅಧ್ಯಾದೇಶದ ಪ್ರಕಟಣೆಯ ದಿನಾಂಕದಿಂದ ಒಂದು ತಿಂಗಳೊಳಗೆ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ ಅಡಿಯಲ್ಲಿ ಸರ್ಕಾರವು ನಿಗದಿ ಮಾಡಿದ ದರದಲ್ಲಿ ಮಾತ್ರವೇ ತಾನು ನೀಡಿದ ಸಾಲದ ಮೇಲೆ ಬಡ್ಡಿಯನ್ನು ವಿಧಿಸುವ ತನ್ನ ಉದ್ದೇಶವನ್ನು ನ್ಯಾಯಾಲಯದ ಮುಂದೆ ಪ್ರಕಟಪಡಿಸುವ ಒಂದು ಅರ್ಜಿಯನ್ನು ದಾಖಲು ಮಾಡಬಹುದು ಮತ್ತು ಹಾಗೆ ಪ್ರಕಟಪಡಿಸಿದ ತರುವಾಯ ಅಂಥ ಸಾಲದ ಸಂಬಂಧದಲ್ಲಿ ಬಡ್ಡಿಯನ್ನು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ ಅಡಿಯಲ್ಲಿ ಸರ್ಕಾರವು ನಿಗದಿಪಡಿಸತಕ್ಕದ್ದು ಮತ್ತು ಈ ಅಧ್ಯಾದೇಶದ ಅಡಿಯಲ್ಲಿನ ಅಪರಾಧಗಳಿಗಾಗಿ ಯಾವುದೇ ಅಭಿಯೋಜನೆಯನ್ನು ಅಂಥ ಸಾಲದ ಸಂಬಂಧದಲ್ಲಿ ಹೂಡತಕ್ಕದ್ದಲ್ಲ.

**8. ಬಡ್ಡಿಯ ಹೊಂದಾಣಿಕೆ.-** ನ್ಯಾಯಾಲಯವು, ಬಡ್ಡಿಯೂ ಸೇರಿದಂತೆ ಸಾಲದ ಇತ್ಯರ್ಥಕ್ಕಾಗಿ ಸಾಲಗಾರನು ದಾಖಲು ಮಾಡಿದ ಅರ್ಜಿಗೆ ಸಂಬಂಧಿಸಿದ ಸಾಲಕ್ಕಾಗಿ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ ಅಡಿಯಲ್ಲಿ ಸರ್ಕಾರವು ನಿಗದಿಪಡಿಸಿದ ಬಡ್ಡಿಯ ದರಕ್ಕಿಂತ ಹೆಚ್ಚಿನ ದರವನ್ನು ಸಾಲಗಾರನು ಸಂದಾಯ ಮಾಡಿದ್ದಲ್ಲಿ ಆ ಬಡ್ಡಿಯನ್ನು ಹೊಂದಾಣಿಕೆ ಮಾಡುವಂತೆ ಆದೇಶ ಹೊರಡಿಸಬಹುದು.

**9. ಆತ್ಮಹತ್ಯೆಗೆ ದುಷ್ಪ್ರೇರಣೆ.-** ಒಬ್ಬ ಸಾಲಗಾರ ಅಥವಾ ಅವನ ಕುಟುಂಬದ ಯಾವೊಬ್ಬ ಸದಸ್ಯನು ಆತ್ಮಹತ್ಯೆ ಮಾಡಿಕೊಂಡಲ್ಲಿ ಮತ್ತು ಅಂಥ ಆತ್ಮಹತ್ಯೆಗೆ ನಿಕಟಪೂರ್ವದಲ್ಲಿ, ಸಾಲಗಾರ ಅಥವಾ ಅವನ ಕುಟುಂಬದ ಯಾವೊಬ್ಬ ಸದಸ್ಯನನ್ನು, ಯಾವೊಬ್ಬ ವ್ಯಕ್ತಿಯು ಪೀಡಿಸಿದ್ದರೆ, ಅದಕ್ಕೆ ವಿರುದ್ಧವಾಗಿ ರುಜುವಾತಾದಾಗ ಹೊರತು, ಸಾಲ ನೀಡಿದ ವ್ಯಕ್ತಿಯು, ಅಂಥ ಆತ್ಮಹತ್ಯೆ ಮಾಡಿಕೊಳ್ಳುವುದಕ್ಕೆ ದುಷ್ಪ್ರೇರಿಸಿದ್ದಾನೆ ಎಂದು ಭಾವಿಸತಕ್ಕದ್ದು.

**ವಿವರಣೆ:-** ಈ ಪ್ರಕರಣದ ಉದ್ದೇಶಕ್ಕಾಗಿ "ಕುಟುಂಬದ ಸದಸ್ಯ" ಎಂದರೆ, ಗಂಡ ಅಥವಾ ಹೆಂಡತಿ, ಅವಿವಾಹಿತ ಮಗಳು ಅಥವಾ ಅವಿವಾಹಿತ ಮಗ.

**10. ನ್ಯಾಯಾಲಯ ಶುಲ್ಕ.-** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಈ ಅಧ್ಯಾದೇಶದ ಅಡಿಯಲ್ಲಿನ ಅರ್ಜಿಗೆ ಸಂಬಂಧಿಸಿದಂತೆ ಸಂದಾಯ ಮಾಡಲಾಗುವ ನ್ಯಾಯಾಲಯ ಶುಲ್ಕವು ಐವತ್ತು ರೂಪಾಯಿಗಳಾಗಿರತಕ್ಕದ್ದು.

**11. ಅಧ್ಯಾದೇಶವು ಇತರೆ ಕಾನೂನುಗಳನ್ನು ನ್ಯೂನಗೊಳಿಸದಿರುವುದು.-** ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ 28ನೇ ಪ್ರಕರಣದ (3)ನೇ ಉಪಪ್ರಕರಣದ ಮತ್ತು 38 ರಿಂದ 40ನೇ ಪ್ರಕರಣಗಳ ಉಪಬಂಧಗಳು ಈ ಅಧ್ಯಾದೇಶದ ಅಡಿಯಲ್ಲಿನ ಅಪರಾಧಗಳಿಗೆ ಅನ್ವಯಿಸತಕ್ಕದ್ದಲ್ಲ. ಈ ಅಧ್ಯಾದೇಶದ ಉಪಬಂಧಗಳು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರೆ ಕಾನೂನಿನ ಉಪಬಂಧಗಳ ಜೊತೆಗೆ ಹೆಚ್ಚಿಗೆಯಾಗಿ ಇರತಕ್ಕದ್ದು ಮತ್ತು ಅದನ್ನು ನ್ಯೂನಗೊಳಿಸತಕ್ಕದ್ದಲ್ಲ.

**12. ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ ಉಪಬಂಧಗಳ ಅನ್ವಯ.-** ಈ ಅಧ್ಯಾದೇಶದ ಉಪಬಂಧಗಳಿಗೆ ಒಳಪಟ್ಟು, ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ ಉಪಬಂಧಗಳು, ಅವು ಲೇವಾದೇವಿಗಾರರಿಗೆ ಅನ್ವಯವಾಗುವಷ್ಟರ ಮಟ್ಟಿಗೆ, ಈ ಅಧ್ಯಾದೇಶದ 3ನೇ ಪ್ರಕರಣದಲ್ಲಿ ಉಲ್ಲೇಖಿಸಿದ ಒಬ್ಬ ವ್ಯಕ್ತಿಗೆ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು.

**ವಿವರಣೆ:-** ಒಬ್ಬ ವ್ಯಕ್ತಿಯ ಕೃತ್ಯವು ಈ ಅಧ್ಯಾದೇಶದ ಅಡಿಯಲ್ಲಿ ಅಥವಾ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರ ಅಡಿಯಲ್ಲಿ ಒಂದು ಅಪರಾಧವಾಗಿದ್ದರೆ, ಈ ಅಧ್ಯಾದೇಶದ ಅಡಿಯಲ್ಲಿ ಅವನ ವಿರುದ್ಧ ಅಭಿಯೋಜನೆಯನ್ನು ಪ್ರಾರಂಭಿಸತಕ್ಕದ್ದು.

**13. ಸಾಲದ ಮರು ಸಂದಾಯದ ಮುಂದೂಡಿಕೆ.-** ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961 ರಲ್ಲಿ ಏನೇ ಒಳಗೊಂಡಿದ್ದರೂ, ಸಾಲಗಾರನು ರೈತ ಅಥವಾ ಕೃಷಿ ಕಾರ್ಮಿಕನಾಗಿದ್ದಲ್ಲಿ ಅವನ ವಿರುದ್ಧ, ಈ ಅಧ್ಯಾದೇಶದ ಪ್ರಾರಂಭದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಸಾಲ ವಸೂಲಿಗಾಗಿ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

**ಟಿ.ಎನ್. ಚತುರ್ವೇದಿ**
**ಕರ್ನಾಟಕ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**ಮ.ರಾ. ಹೆಗಡೆ**
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.